## ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:**-ಶ್ರೀ ಎ.ಎ.ಹುಲಗೇರಿ. ನಿವೃತ್ತ ಜಿಲ್ಲಾ ನ್ಯಾಯಾಧೀಶರು ಮತ್ತು ವಿಚಾರಣಾಧಿಕಾರಿಗಳು ಇವರಿಗೆ ಸಂಚಿತ ಸಂಭಾವನೆಯನ್ನು ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 59 ವಿಸೇಚಿ 2010. ದಿನಾಂಕ: 10-12-2015.

2. ವಿಚಾರಣಾಧಿಕಾರಿಯವರ ವರದಿ ದಿನಾಂಕ:22-08-2016.

----

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಬೀದರ್ ಜಿಲ್ಲೆ ಭಾಲ್ಕಿ ತಾ.ಪಂ.ವ್ಯಾಪ್ತಿಯಲ್ಲಿ ಆಶ್ರಯ ಮತ್ತಿತರ ಯೋಜನೆಗಳಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿ/ನೌಕರರ ವಿರುದ್ಧ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಎಸಗಿದ್ದಾರೆ ಎನ್ನಲಾದ ಕರ್ತವ್ಯಲೋಪ/ದುರ್ನಡತೆ ಆರೋಪಗಳ ಕುರಿತಂತೆ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿಯಾಗಿ ಶ್ರೀ ಎ.ಎ.ಹುಲಗೇರಿ. ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ನೇಮಿಸಲಾಗಿತ್ತು. ಸದರಿಯುವರು ಪ್ರಕರಣದ ಇಲಾಖಾ ವಿಚಾರಣೆಯನ್ನು ನಡೆಸಿ. ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿ:22-08-2016 ರ ಪತ್ರದೊಂದಿಗೆ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ. ಸಂಭಾವನೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು. ಇಲಾಖಾ ವಿಚಾರಣೆಯನ್ನು ನಡೆಸಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದರಿಂದ. ವಿಚಾರಣಾಧಿಕಾರಿಗಳಿಗೆ ಅವರ ನೇಮಕಾತಿ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದಂತೆ ಸಂಚಿತ ಸಂಭಾವನೆ ಹಾಗೂ ವಾಹನ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 59 ವಿಸೇಚಿ 2010. ಬೆಂಗಳೂರು ದಿನಾಂಕ: 28-10-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಸರ್ಕಾರವು ಶ್ರೀ ಎ.ಎ.ಹುಲಗೇರಿ. ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು ಇವರಿಗೆ ಸರ್ಕಾರಿ ಆದೇಶ ಸಂ: ಸಿಆಸುಇ 45 ಸೇಇವಿ 2014 ದಿನಾಂಕ:08-01-2015ರ ಪ್ರಕಾರ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 20,000/-(ಇಪ್ಪತ್ತು ಸಾವಿರ ರೂಪಾಯಿಗಳು ಮಾತ್ರ) ಗಳ ಸಂಭಾವನೆ ಮಂಜೂರು ಮಾಡಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ. ಜಿಲ್ಲಾ ಪಂಚಾಯತಿ. ಬೀದರ್ ಇವರು ಶ್ರೀ ಎ.ಎ.ಹುಲಗೇರಿ. ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು. ಇವರಿಗೆ ಸದರಿ ಮೊತ್ತವನ್ನು ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

28/10/2016

(ಎಸ್. ರಂಗನಗೌಡ).
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಚಿ&ಸಿ).
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು. ಕರ್ನಾಟಕ. ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ. ಜಿಲ್ಲಾ ಪಂಚಾಯತಿ. ಬೀದರ್.
3. ಎ.ಎ.ಹುಲಗೇರಿ. ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು. ನಹೀಂ ಮಂಜಿಲ್.2ನೇ ಮುಖ್ಯ ರಸ್ತೆ.8ನೇ ಕ್ರಾಸ್.ಶಿವಗಿರಿ.ಧಾರವಾಡ-580001.

ಪ್ರತಿಯನ್ನು:-

1.ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ). ಗ್ರಾ .ಅ. & ಪಂ.ರಾಜ್ ಇಲಾಖೆ. ಇವರ ಆಪ್ತ ಶಾಖೆಗೆ.
2.ವಿಶೇಷಾಧಿಕಾರಿ. ಗಣಕ ಕೋಶ. ಗ್ರಾ.ಅ.ಪಂ.ರಾಜ್ ಇಲಾಖೆ.
3.ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

GO